# ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 22/2019

**ಚಾ.ಸಾ. :- 19**
**ಪ್ರಾ.ಸಾ. :- 06**

| | | |
|---|---|---|
| ಹೆಸರು | : | ರವೀಂದ್ರ ಸಿ.ಎಂ. |
| ತಂದೆಯ ಹೆಸರು | : | ಮರೀಗೌಡ |
| ವಯಸ್ಸು | : | 46 ವರ್ಷ |
| ಉದ್ಯೋಗ | : | ಪಿ.ಐ., ನಂಜನಗೂಡು |
| ವಾಸಸ್ಥಳ | : | ನಂಜನಗೂಡು. |

**ಪ್ರಮಾಣೀಕರಿಸಲಾದ ದಿನಾಂಕಃ- 24.12.2025**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2017 ರಿಂದ 2019 ರ ಅವಧಿಯಲ್ಲಿ ಶ್ರೀರಂಗಪಟ್ಟಣದ ವೃತ್ತ ನಿರೀಕ್ಷಕರಾಗಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 21.11.2018 ರಂದು ನಾನು ಚಾ.ಸಾ-18 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಪಂಚರ ಸಮಕ್ಷಮ ಮೃತರ ಶವಪಂಚನಾಮೆಯನ್ನು ಜರುಗಿಸಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ **ನಿಪಿ-6** ಎಂದು ಗುರುತಿಸಲಾಗಿದೆ. ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ನಂತರ ಕೃತ್ಯ ಸ್ಥಳಕ್ಕೆ ಹೋಗಿ ಪಂಚರ ಸಮಕ್ಷಮದಲ್ಲಿ ಕೃತ್ಯ ಸ್ಥಳದ ಮಹಜರನ್ನು ತಯಾರು ಮಾಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ **ನಿಪಿ-2** ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಬಿ)** ಎಂದು

ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ಕಚ್ಚಾ ನಕಾಶೆಯನ್ನು ತಯಾರು ಮಾಡಿದ್ದು, ಅದನ್ನು ನಿಪಿ 16 ಎಂದು ಗುರುತಿಸಲಾಯಿತು.

ಪೋಲೀಸ್ ಠಾಣಾ ಆವರಣದಲ್ಲಿ ಸಿಬ್ಬಂದಿಗಳು ಹಾಜರುಪಡಿಸಿದ ವಾಹನಗಳನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-7 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-7(ಸಿ) ಎಂದು ಗುರುತಿಸಲಾಯಿತು.

ಅಪಘಾತಕ್ಕೆ ಸಂಬಂಧಿಸಿದಂತೆ ಎರಡೂ ವಾಹನಗಳನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿರುತ್ತೇನೆ.

ನಂತರ ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ಈಗಾಗಲೇ **ನಿಪಿ-13 ಮತ್ತು 14** ಎಂದು ಗುರುತಿಸಲಾಗಿದೆ. ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ಈಗಾಗಲೇ ನಿಪಿ 8 ಎಂದು ಗುರುತಿಸಲಾಗಿದೆ.

ಮೃತರ ದೇಹದ ಅಂಗಾಂಗಗಳನ್ನು ಎಫ್.ಎಸ್.ಎಲ್. ವರದಿಗೆ ಕಳುಹಿಸಿಕೊಟ್ಟಿರುತ್ತೇವೆ.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿರುತ್ತೇನೆ.

ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ಆರೋಪಿಯನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-20 ರವರು ಪಡೆದುಕೊಂಡಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ಆ ದಿನ ಬೆಳಿಗ್ಗೆ 8.45ಕ್ಕೆ ಕಛೇರಿಯಿಂದ ಆಸ್ಪತ್ರೆಗೆ ಹೊರಟು ಸ್ಥಳ ಪಂಚನಾಮೆ ಮಾಡಿರುತ್ತೇನೆ. ನಂತರ ಕೃತ್ಯ ನಡೆದ ಸ್ಥಳದ ಮಹಜರ್ ಮಾಡಿರುತ್ತೇನೆ. ನಾನು ನಂತರ ಠಾಣಗೆ 1.30ರ ಸಮಯಕ್ಕೆ ಬಂದಿರುತ್ತೇನೆ. ಸದರಿ ಸಮಯಗಳನ್ನು ತೋರಿಸಲು ನ್ಯಾಯಾಲಯಕ್ಕೆ ಠಾಣಾ ದಿನಚರಿಯನ್ನು ಹಾಜರುಪಡಿಸಿಲ್ಲ. ಜೀಪಿನ ಲಾಗ್ ಬುಕ್ಕನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಅಪಘಾತ ಸ್ಥಳದ ಸ್ವಲ್ಪ ದೂರದಲ್ಲಿ ಮನೆಗಳಿದ್ದವು. ಮೃತರು ಹಾಗೂ ಚಾಸಾ8 ರವರು ಒಂದೇ ಜಾತಿಗೆ ಸೇರಿರುತ್ತಾರೆ ಎಂದರೆ ಸರಿ. ಚಾಸಾ 8 , 9 ಮತ್ತು ಮೃತರು ಒಂದೇ ಗ್ರಾಮದವರು ಎಂದರೆ ಸರಿ. ಪೋಲೀಸ್ ಮ್ಯಾನ್ಯುಯಲ್ ಪ್ರಕಾರ ಸ್ಥಳೀಯರನ್ನು ಪಂಚನಾಮೆಗೆ ಸಾಕ್ಷಿಗಳನ್ನಾಗಿ ಮಾಡಬೇಕೆಂದರೆ ಸಾಕ್ಷಿ ಮುಂದುವರೆದು ಸ್ಥಳೀಯರು ಮುಂದುವರೆದು ಸಾಕ್ಷಿಗಳಾಗಿ ಬರದಿದ್ದಾಗ ಅಕ್ಕ ಪಕ್ಕದ ಗ್ರಾಮದವರನ್ನು ಸಾಕ್ಷಿದಾರರಾಗಿ ಕರೆದುಕೊಂಡಿರುತ್ತೇವೆ ಎನ್ನುತ್ತಾರೆ. ಸ್ಥಳೀಯರು ಪಂಚರಾಗಿ ಬರಲಿಲ್ಲ ಎಂದು ಪಂಚನಾಮೆಯಲ್ಲಿ ಬರೆದಿಲ್ಲ. ಅಪಪಘಾತವಾದ ಸ್ಥಳದಿಂದ ಕ್ಯಾತನಹಳ್ಳಿ ಗ್ರಾಮ 2-3 ಕಿಮೀ ದೂರದಲ್ಲಿರುತ್ತದೆ. ಮಹಜರ್ ನಲ್ಲಿ ಅಕ್ಕ ಪಕ್ಕದವರನ್ನು ತೋರಿಸಿದ್ದು ಅವರನ್ನು ಪಂಚನಾಮೆಯನ್ನಾಗಿ ಮಾಡಿಲ್ಲ ಎಂದರೆ ಬರಲಿಲ್ಲ ಎನ್ನುತ್ತಾರೆ. ಅವರನ್ನು ನಾನು ಪಂಚನಾಮೆಯಾಗಿ ಬರಲು ಕೇಳಿದ ಬಗ್ಗೆ ಅವರು ನಿರಾಕರಿಸಿದ ಬಗ್ಗೆ ಅಂತಿಮ ವರದಿಯಲ್ಲಿ ಉಲ್ಲೇಖ ಇಲ್ಲ.

ಆರೋಪಿ ನಿರ್ಲಕ್ಷ್ಯತೆಯಿಂದ ವಾಹನ ಚಾಲನೆ ಮಾಡುತ್ತಿದ್ದರು ಎಂದು ತೋರಿಸಲು ಅಕ್ಕಪಕ್ಕದ ಡಾಬಾ ಮತ್ತು ವೇಬ್ರಿಡ್ಜ್ ನ ಸಿಸಿಟಿವಿಗಳನ್ನು ಪರಿಶೀಲಿಸಿರುತ್ತೀರ ಎಂದರೆ ಇಲ್ಲ.

ನನ್ನ ತನಿಖಾ ಸಮಯದಲ್ಲಿ ಆರೋಪಿ ತಪ್ಪಿನಿಂದ ಅಪಘಾತ ಆಗಿಲ್ಲ ಎಂದು ತಿಳಿದು ಬಂದಿದ್ದರು ಹಾಗೂ ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದು ತಿಳಿದಿದ್ದರೂ ಮೃತರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಕಚ್ಚಾ ನಕಾಶೆ ಮತ್ತು ಸ್ಥಳ ಮಹಜರನ್ನು ಠಾಣೆಯಲ್ಲೇ ಕುಳಿತು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ

ಅಜಾಗರೂಕತೆಯಿಂದ ವಾಹನ ಚಾಲನೆ ಮಾಡುತ್ತಿದ್ದರೂ ಎಂದು ತೋರಿಸಲು ಪೂರಕ ದಾಖಲೆಗಳನ್ನು ನ್ಯಾಯಾಲಯಕ್ಕೆ ಕೊಟ್ಟಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**